ಅಪರ  ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ.   8967/2022

ಸಿ.ಡಬ್ಲ್ಯೂ -02
ಪಿ.ಡಬ್ಲ್ಯೂ-01

ಸಾಕ್ಷಿದಾರನ ಹೆಸರು  :- ಚೌಡಯ್ಯ
ತಂದೆಯ   ಹೆಸರು   :-  ತಿಮ್ಮಯ್ಯ
ವಯಸ್ಸು            :- 52 ವರ್ಷ
ಉದ್ಯೋಗ          :- ವ್ಯವಸಾಯ
ವಾಸ               :- ಉಜ್ಜನಿ

**ಸಾಕ್ಷಿಗೆ ದಿಃ 29.06.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ಆರೋಪಿತರು ನನಗೆ ಗೊತ್ತು. ಚಾಸಾ 1 ನನಗೆ ಗೊತ್ತು. ನನಗೆ ಪ್ರಕರಣದ ಬಗ್ಗೆ ಏನು ಮಾಹಿತಿ ಇಲ್ಲ. ನಾನು ಪೊಲಿಸರು ಮುಂದೆ ನಾನು ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 05.05.2022 ರಂದು  ನಾನು ಕೆಲಸದ ನಿಮಿತ್ಯ ಬೈಕನಲ್ಲಿ ಉಜ್ಜನಿ ಗ್ರಾಮಕ್ಕೆ ಹೋಗಿದ್ದು ಕೆಲಸ ಮುಗಿಸಿಕೊಂಡು  ಸಂಜೆ 5.30 ಗಂಟೆಯ ಸಮಯದಲ್ಲಿ ಮನೆಗೆ ಹೋಗುತ್ತಿರುವಾಗ ರಾಜಪ್ಪನದೊಡ್ಡಿ ಗ್ರಾಮದಲ್ಲಿ ಚಾಸಾ 1 ಮತ್ತು ಆರೋಪಿ ಜಗಳ ಮಾಡುತ್ತಿದ್ದರು ಎಂದರೆ ಸರಿಯಲ್ಲ. ಚಾಸಾ 1 ಅವರಿಗೆ ನಾನು ವಿಚಾರಿಸಲಾಗಿ ಚಾಸಾ 1 ಅವರು ಚೂಡಿದಾರ ಟಾಪ್ ಬಟ್ಟೆಯನ್ನು ಮಾತ್ರ ಹಾಕಿಕೊಂಡಿದ್ದು ಪ್ಯಾಂಟ್ ಇರಲಿಲ್ಲವೆಂದರೆ ಸರಿಯಲ್ಲ. ಆದ ದಿನ ಬೆಳಿಗ್ಗೆ ಡಿ.ಎನ್ ಮಾಡಿಸಲು ತುಮಕೂರಿಗೆ ಹೋಗಿ ಸಂಜೆ 5.30 ರ ಸಮಯದಲ್ಲಿ ನಮ್ಮ ಊರಿಗೆ ಗೇಟ್ ಬಳಿ ನಡೆದುಕೊಂಡು ಹೋಗುತ್ತಿರುವಾಗ ಆರೋಪಿ ಅವರನ್ನು ಹಿಡಿದು ಎಳೆದಾಡಿ ಕೈಯಿಂದ ತಲೆಗೆ ಮೈ ಕೈಗೆ ಹೊಡೆದು ನರಸಿಂಹಯ್ಯ ಅವರ

ರೇಷ್ಮೆ ತೋಟಕ್ಕೆ ಬಲವಂತವಾಗಿ ಎಳೆದುಕೊಂಡು ಹೋಗಿ ಚಾಸಾ 1 ಅವರನ್ನು ಕೆಳಕ್ಕೆ ಕೆಡವಿಕೊಂಡು ಬಾಯಿ ಮುಚ್ಚಿಕೊಂಡು ಕಾಲಿನಿಂದ ಕುತ್ತಿಗೆಯ ಮೇಲೆ ತುಳಿದುದ ಚಾಸಾ 1 ಅವರು ಹಾಕಿಕೊಂಡಿದ್ದ ಚೂಡಿದಾರ ಟಾಪ್ ಬಟ್ಟೆಯನ್ನು ಹರಿದು ಹಾಕಿ ಚಾಸಾ 1 ಅವರು ಹಾಕಿಕೊಂಡಿದ್ದು ಪ್ಯಾಂಟನ್ನು ಕಿತ್ತೆಸೆದು ಅವಮಾನ ಪಡಿಸಿರುತ್ತಾನೆ ಎಂದರೆ ಸರಿಯಲ್ಲ. ನಾನು ಈ ಬಗ್ಗೆ ದಿನಾಂಕ 06.05.2022 ರಂದು ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ 1 ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ಇದ್ದರು ಸಹ ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.